## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರ ಗೌರವಧನದ ಮೊತ್ತವನ್ನು ಪರಿಷ್ಕರಿಸುವ ಬಗ್ಗೆ.

ಓದಲಾಗಿದೆ: ಸರ್ಕಾರಿ ಆದೇಶ ಸಂಖ್ಯೆ:ಇಡಿ 371 ಡಿಸಿಇ 2013, ದಿನಾಂಕ: 17-04-2015.

**ಪ್ರಸ್ತಾವನೆ:**

ಕಾಲೇಜು ಶಿಕ್ಷಣ ಇಲಾಖೆಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಲ್ಲಿ ಸ್ನಾತಕೋತ್ತರ ಪದವಿ ಪರೀಕ್ಷೆಯಲ್ಲಿ ಕನಿಷ್ಠ ಶೇ.55 ರಷ್ಟು ಅಂಕಗಳನ್ನು ಪಡೆದಿದ್ದು, NET/SLET ಅಥವಾ Ph.D. ಮಾಡಿಕೊಂಡಿರುವ ಅತಿಥಿ ಉಪನ್ಯಾಸಕರಿಗೆ ನೀಡುತ್ತಿದ್ದ ಮಾಸಿಕ ಗೌರವಧನದ ಮೊತ್ತವನ್ನು ಮೇಲೆ ಓದಲಾದ ಆದೇಶದಲ್ಲಿ ರೂ.10,000/- ರಿಂದ ರೂ.11,500/-ಕ್ಕೆ ಮತ್ತು ಇತರೆ ಅತಿಥಿ ಉಪನ್ಯಾಸಕರ ಮಾಸಿಕ ಗೌರವಧನದ ಮೊತ್ತವನ್ನು ರೂ.8,000/- ರಿಂದ ರೂ.9,500/-ಕ್ಕೆ ಹೆಚ್ಚಿಸಿ ಪರಿಷ್ಕರಿಸಲಾಗಿತ್ತು.

ಪ್ರಸ್ತುತ ಅತಿಥಿ ಉಪನ್ಯಾಸಕರ ಮಾಸಿಕ ಗೌರವಧನದ ಮೊತ್ತವನ್ನು ಪರಿಷ್ಕರಿಸಿ NET/SLET ಅಥವಾ Ph.D. ಮಾಡಿಕೊಂಡಿರುವ ಅತಿಥಿ ಉಪನ್ಯಾಸಕರಿಗೆ ನೀಡುತ್ತಿರುವ ಮಾಸಿಕ ಗೌರವಧನದ ಮೊತ್ತವನ್ನು ಮಾರ್ಚ್ 2017 ರಿಂದ ಜಾರಿಗೆ ಬರುವಂತೆ ರೂ.11,500/- ರಿಂದ ರೂ.13,000/-ಕ್ಕೆ ಹಾಗೂ ಇತರೆ ಅತಿಥಿ ಉಪನ್ಯಾಸಕರ ಮಾಸಿಕ ಗೌರವಧನದ ಮೊತ್ತವನ್ನು ರೂ.9,500/- ರಿಂದ ರೂ.11,000/-ಕ್ಕೆ ಹೆಚ್ಚಿಸಲು ಸರ್ಕಾರ ತೀರ್ಮಾನಿಸಿದೆ. ಅದರಂತೆ ಈ ಆದೇಶ.

**ಸರ್ಕಾರಿ ಆದೇಶ ಸಂಖ್ಯೆ:ಇಡಿ 66 ಡಿಸಿಇ 2017,**

**ಬೆಂಗಳೂರು, ದಿನಾಂಕ:04-04-2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕಾಲೇಜು ಶಿಕ್ಷಣ ಇಲಾಖೆಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಲ್ಲಿ ಸ್ನಾತಕೋತ್ತರ ಪದವಿ ಪರೀಕ್ಷೆಯಲ್ಲಿ ಕನಿಷ್ಠ ಶೇ.55 ರಷ್ಟು ಅಂಕಗಳನ್ನು ಪಡೆದಿದ್ದು, NET/SLET ಅಥವಾ Ph.D. ಮಾಡಿಕೊಂಡಿರುವ ಅತಿಥಿ ಉಪನ್ಯಾಸಕರಿಗೆ ನೀಡುತ್ತಿರುವ ಮಾಸಿಕ ಗೌರವಧನದ ಮೊತ್ತವನ್ನು ಮಾರ್ಚ್ 2017 ರಿಂದ ಜಾರಿಗೆ ಬರುವಂತೆ ರೂ.11,500/- ರಿಂದ ರೂ.13,000/- (ಹದಿಮೂರು ಸಾವಿರ ರೂಪಾಯಿಗಳು ಮಾತ್ರ) ಹಾಗೂ ಇತರೆ ಅತಿಥಿ ಉಪನ್ಯಾಸಕರ ಮಾಸಿಕ ಗೌರವಧನದ ಮೊತ್ತವನ್ನು ರೂ.9,500/- ರಿಂದ ರೂ11,000/- (ಹನ್ನೊಂದು ಸಾವಿರ ರೂಪಾಯಿಗಳು ಮಾತ್ರ)ಕ್ಕೆ ಹೆಚ್ಚಿಸಿ ಆದೇಶಿಸಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ:ಆಇ 702 ವೆಚ್ಚ-8/2016. ದಿನಾಂಕ:03-03-2017ರಂತೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಕೆ.ಶಿವಲಿಂಗಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ
ಶಿಕ್ಷಣ ಇಲಾಖೆ (ಕಾಲೇಜು ಶಿಕ್ಷಣ).

---

ಸಂಖ್ಯೆ: ಕಾಶಿಇ/08/ಅಉಗೌ/2017-18/ನೇವಿ-1

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:10.04.2017.

ಮೇಲ್ಕಂಡ ಸರ್ಕಾರದ ಆದೇಶವನ್ನು ಈ ಕೆಳಕಂಡವರುಗಳಿಗೆ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ ರವಾನಿಸಲಾಗಿದೆ.

1. ಜಂಟಿ ನಿರ್ದೇಶಕರು, ಪ್ರಾದೇಶಿಕ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು/ಮೈಸೂರು/ಮಂಗಳೂರು/ಧಾರವಾಡ/ಶಿವಮೊಗ್ಗ/ಕಲಬುರಗಿ.
2. ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.

<u>ಪ್ರತಿಯನ್ನು ಮಾಹಿತಿಗಾಗಿ:</u>

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ(ಉನ್ನತ ಶಿಕ್ಷಣ), ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಲೆಕ್ಕಾಧಿಕಾರಿಗಳು, ಆಯವ್ಯಯ ವಿಭಾಗ, ಕಾಲೇಜು ಶಿಕ್ಷಣ ಇಲಾಖೆ, ಕೇಂದ್ರ ಕಛೇರಿ, ಬೆಂಗಳೂರು.
4. ಮಾಹಿತಿ ಅಧಿಕಾರಿಗಳು, ಕಾಲೇಜು ಶಿಕ್ಷಣ ಇಲಾಖೆ, ಕೇಂದ್ರ ಕಛೇರಿ, ಬೆಂಗಳೂರು- ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
5. ಹೆಚ್ಚುವರಿ ಪ್ರತಿ.
6. ಕಛೇರಿ ಪ್ರತಿ.

ಕಾಲೇಜು ಶಿಕ್ಷಣ ಮುಖ್ಯ ಆಡಳಿತಾಧಿಕಾರಿಗಳು